ಅಧ್ಯಕ್ಷರು:– ಪ್ರಸ್ತಾವ ಏನೆಂದರೆ 2015ರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ

2 ರಿಂದ 4 ರವರೆಗಿನ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ

2 ರಿಂದ 4 ರವರೆಗಿನ ಖಂಡಗಳು ವಿಧೇಯಕದ ಅಂಗವಾದವು

ಶ್ರೀ ಅರವಿಂದ ಲಿಂಬಾವಳಿ:– ನಾವು ಕೊಟ್ಟಿರುವಂತಹ ಸಲಹೆಗಳನ್ನು ಸರ್ಕಾರ ಗಮನಕ್ಕೆ ತೆಗೆದುಕೊಳ್ಳುತ್ತಿಲ್ಲ ಇದನ್ನು ಬಲವಾಗಿ ಭಾರತೀಯ ಜನತಾ ಪಕ್ಷ ವಿರೋಧ ಮಾಡಿ ಸಭಾತ್ಯಾಗ ಮಾಡುತ್ತಿದ್ದೇವೆ.

ಶ್ರೀ ಸಿ.ಟಿ. ರವಿ:– ನಾವು ಕೊಟ್ಟ ಯಾವ ಸಲಹೆಗಳನ್ನು ಪರಿಗಣಿಸಿಲ್ಲ. ಈ ರಾಜ್ಯದ ಹಿತದ ಬಗ್ಗೆ ಲಕ್ಷ್ಯವಿಲ್ಲ. Management ಜೊತೆ ಶಾಮೀಲಾಗಿದೆ.

ಶ್ರೀ ಅರವಿಂದ ಲಿಂಬಾವಳಿ:– ಇದು management ಪರವಾಗಿರುವಂತಹ ಸರ್ಕಾರ. ರಾಜ್ಯದ ಜನರಿಗೆ ಅನ್ಯಾಯ ಮಾಡುತ್ತಿದೆ.

(ಈ ಹಂತದಲ್ಲಿ ಭಾರತೀಯ ಜನತಾ ಪಕ್ಷದ ಎಲ್ಲಾ ಸದಸ್ಯರು ಸಭಾತ್ಯಾಗ ಮಾಡಿದರು)